# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 125 ಗ್ರಾಪಂಅ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:03-02-2020.

## ಸುತ್ತೋಲೆ

ವಿಷಯ: ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ನಾಗರೀಕರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಸಕಾಲ ತಂತ್ರಾಂಶದ ಮೂಲಕ ವಿತರಿಸುವ ಬಗ್ಗೆ.

ಉಲ್ಲೇಖ: ನಿರ್ದೇಶಕರು (ಇ-ಆಡಳಿತ) ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 39 ಗ.ಕೋಶ 2019, ದಿನಾಂಕ: 12-10-2019.

****

ಕರ್ನಾಟಕ ನಾಗರೀಕ ಸೇವೆಗಳ ಖಾತರಿ ಅಧಿನಿಯಮ, 2011 ರಡಿ ರಾಜ್ಯದ 6021 ಗ್ರಾಮ ಪಂಚಾಯತಿಗಳಲ್ಲಿ ಸಕಾಲ ಸೇವೆಯನ್ನು ಜಾರಿಗೊಳಿಸಲಾಗಿದೆ. ಸಕಾಲ ಸೇವೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡ 11 ಸೇವೆಗಳು ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ನೀಡುವ ಸೌಲಭ್ಯವಾಗಿದೆ.

1. ಕರನಿರ್ಧರಣಾ ಪಟ್ಟಿಯ ಬದಲಾವಣೆ
2. ಕಟ್ಟಡ ಲೈಸೆನ್ಸ್
3. ಸಾಮಾನ್ಯ ಲೈಸೆನ್ಸ್ (ವಾಣಿಜ್ಯ ಲೈಸೆನ್ಸ್)
4. ಕುಡಿಯುವ ನೀರಿನ ನಿರ್ವಹಣೆ
5. ಬೀದಿ ದೀಪಗಳ ನಿರ್ವಹಣೆ
6. ಗ್ರಾಮ ನೈರ್ಮಲ್ಯ ನಿರ್ವಹಣೆ
7. ಜನಗಣತಿ, ಜಾನುವಾರು ಗಣತಿ, ಬಡತನ ರೇಖೆಗಿಂತ ಕಡಿಮೆ ಇರುವ ವ್ಯಕ್ತಿಗಳಿಗೆ ಸಂಬಂಧಿಸಿದ ದಸ್ತಾವೇಜುಗಳು ಮತ್ತು ಗ್ರಾಮ ಪಂಚಾಯತಿಯಿಂದ ಕಡ್ಡಾಯವಾಗಿ ನಿರ್ವಹಿಸಬೇಕಾದ ಇತರ ದಸ್ತಾವೇಜುಗಳನ್ನು ನೀಡುವುದು.
8. ಅಕುಶಲ ಕಾರ್ಮಿಕರಿಗೆ ಉದ್ಯೋಗವನ್ನು ಒದಗಿಸುವುದು (ಎಂ.ಜಿ.ಎನ್.ಆರ್.ಇ.ಜಿ.ಎ.)
9. ಎಸ್ಕಾಂಗೆ ನಿರಾಕ್ಷೇಪಣಾ ಪ್ರಮಾಣ ಪತ್ರ
10. ನಮೂನೆ-9.
11. ನಮೂನೆ-11ಬಿ.

ಪ್ರಸ್ತುತ ಗ್ರಾಮ ಪಂಚಾಯತಿಗಳಲ್ಲಿ ನಾಗರೀಕರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಸಕಾಲ ತಂತ್ರಾಂಶದಲ್ಲಿ ನೋಂದಣಿ ಮಾಡದೆ ಸಕಾಲ ಅಧಿನಿಯಮದ ಉಲ್ಲಂಘನೆ (ಸಕಾಲ ತಂತ್ರಾಂಶವನ್ನು Bypass) ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಗ್ರಾಮ ಪಂಚಾಯತಿಗಳಲ್ಲಿ ನಾಗರೀಕರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಸಕಾಲ ತಂತ್ರಾಂಶದಲ್ಲಿ ನೋಂದಣಿ ಮಾಡಿ ಸಕಾಲ ಅರ್ಜಿ ಸಂಖ್ಯೆ (ಜಿಎಸ್‌ಸಿ ಸಂಖ್ಯೆ) ನೀಡಲು ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪಕಾರ್ಯದರ್ಶಿಗಳು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದೆ.

ಗ್ರಾಮ ಪಂಚಾಯತಿಗಳಲ್ಲಿ ಸಕಾಲ ಅಧಿನಿಯಮದ ಉಲ್ಲಂಘನೆಯನ್ನು ತಡೆಗಟ್ಟಲು ಸಕಾಲ ಅರ್ಜಿ ಸಂಖ್ಯೆ (ಜಿಎಸ್‌ಸಿ ಸಂಖ್ಯೆ) ಇಲ್ಲದೆ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಡಿಜಿಟಲ್ ಸಹಿ ಇಲ್ಲದೆ ವಿತರಿಸಲಾಗುವ ಯಾವುದೇ ಪ್ರಮಾಣ ಪತ್ರಗಳು ಕಾನೂನು ಬದ್ಧವಾಗಿ ಮಾನ್ಯವಾಗಿರುವುದಿಲ್ಲವೆಂದು ತಿಳಿಸಿದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತುತ ಗ್ರಾಮ ಪಂಚಾಯತಿಗಳಲ್ಲಿ ನಾಗರೀಕರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಸಕಾಲ ತಂತ್ರಾಂಶದಲ್ಲಿ ನೋಂದಣಿ ಮಾಡದೆ ಸಕಾಲ ಅಧಿನಿಯಮದ ಉಲ್ಲಂಘನೆಗೆ (ಸಕಾಲ ತಂತ್ರಾಂಶವನ್ನು Bypass) ಕಾರಣರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು, 1957 ರನ್ವಯ ಶಿಸ್ತು ಕ್ರಮ ಜರುಗಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದೆ.

(ಎಸ್.ಎ.ಅಶ್ರಫುಲ್ ಹಸನ್)
ನಿರ್ದೇಶಕರು (ಪಂ.ರಾಜ್-1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3/2/2020

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್‌ಗಳು.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ನಿರ್ದೇಶಕರು (ಇ-ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
5) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.